ಶ್ರೀ ವಾಟಾಳ್ ನಾಗರಾಜ್: ತಾವು ಒಳ್ಳೆಯ ಸುದ್ದಿಯನ್ನು ಹೇಳಿದ್ದೀರಿ.

6. ಶಾಸನ ರಚನೆ

(ಅ) ಕರ್ನಾಟಕ ಕಾಕಂಬಿ ನಿಯಂತ್ರಣಾ ವಿಧೇಯಕ, 2004

ಮುಂದುವರೆದ ಚರ್ಚೆ

Sri M.P. Prakash: Confiscation proceedings by the anthorised person and not by the Magistrate.

ಶ್ರೀ ಜಿ.ವಿ. ಶ್ರೀರಾಮರೆಡ್ಡಿ: ಆಯಿತು ಬಿಡಿ ಸಾರ್, ನಾವು ತಮ್ಮ ಗಮನಕ್ಕೆ ತಂದಿದ್ದೇವೆ. ಇದರ ಮೇಲೆ ನಿಮ್ಮಿಷ್ಟ. ಇಲ್ಲಿ ಅಧಿಕಾರಿಗಳಿಗೆ ಸಂಪೂರ್ಣವಾಗಿ ಎಷ್ಟು ಬೇಕೋ ಅಷ್ಟನ್ನು ಮಾಡಿಕೊಳ್ಳುವುದಕ್ಕೆ ಬಹಳ ಚೆನ್ನಾಗಿ ಅನುಕೂಲವನ್ನು ಮಾಡಿಕೊಟ್ಟಿದ್ದೀರಾ ಅಷ್ಟೆ ಬೇರೆ ಏನೂ ಇಲ್ಲ. ತಾವು ಅಧಿಕಾರಿಗಳಿಗೆ ಅನುಕೂಲವನ್ನು ಮಾಡಿಕೊಡುತ್ತಿದ್ದೀರಿ. ಆ ಕಡೆ ಬೆಳೆಗಾರರಿಗೂ ಇಲ್ಲ, ಸರ್ಕಾರಕ್ಕೂ ಇಲ್ಲ. ಬೆಲೆಯನ್ನು ನಿಗಧಿ ಮಾಡತಕ್ಕ ಅಧಿಕಾರಿ ಏನು ಬೇಕಾದರೂ...

ಶ್ರೀ ಬಿ.ಎಸ್. ಯಡಿಯೂರಪ್ಪ: ತಾವು ಒಂದು ಕೆಲಸವನ್ನು ಮಾಡಿ, ತಾವು ಏನು ಸಲಹೆಯನ್ನು ಕೊಡುತ್ತೀರಾ., ಅದನ್ನು ಹೇಳಿ.

(ಅಡಚಣೆ)

ಶ್ರೀ ಎನ್. ಧರ್ಮಸಿಂಗ್: ಮಾನ್ಯ ಉಪಮುಖ್ಯಮಂತ್ರಿಯವರೆ, ಇಲ್ಲಿಯವರೆಗೆ ಬರಗಾಲದ ಬಗ್ಗೆ ಡಾ: ನಂಜುಂಡಪ್ಪನವರ ವರದಿಯ ಬಗ್ಗೆ ಚರ್ಚೆ ನಡೆದಿದೆ. ನಿನ್ನೆ ಕೂಡ ಇವತ್ತು ಇದರ ಬಗ್ಗೆ ಚರ್ಚೆಯಾಗಬೇಕೆಂದು ಆಯಿತು, ಇದರ ಬಗ್ಗೆ ಚರ್ಚೆಯಾದ ಮೇಲೆ ಕೊನೆಯಲ್ಲಿ ಬಿಲ್ ಅನ್ನು ತೆಗೆದುಕೊಳ್ಳಬೇಕೆಂದು ಆಯಿತು. ಈಗ ಮಧ್ಯದಲ್ಲಿ ಬಿಲ್ ಅನ್ನು ತೆಗೆದುಕೊಂಡಿದ್ದೀರಿ. ಇನ್ನು ಸಾಕಷ್ಟು ಮುಖಂಡರುಗಳು ಮಾತನಾಡುವವರು ಇದ್ದಾರೆ. ಅದರ ಬಗ್ಗೆ ಈಗ ಚರ್ಚೆ ಆಗಲಿ, ನಾಳೆ ಬಿಲ್‌ಗಳನ್ನು ತೆಗೆದುಕೊಳ್ಳೋಣ.

ಶ್ರೀ ಬಿ.ಎಸ್. ಯಡಿಯೂರಪ್ಪ: ಈಗ ಎಲ್ಲಾ ಚರ್ಚೆಯಾದ ಮೇಲೆ ಹೀಗೆ ಮಾಡಿದರೆ ಹೇಗೆ?

ಶ್ರೀ ಜಿ.ವಿ. ಶ್ರೀರಾಮರೆಡ್ಡಿ: ಹೋಗಲಿ ಬಿಡಿ, ಮಾಡಿಕೊಂಡು ಹೋಗಿ ಸಾರ್.

ಶ್ರೀ ವೈಜನಾಥ್ ಪಾಟೀಲ್: ಮಾನ್ಯ ಉಪಾಧ್ಯಕ್ಷರೆ, ಚರ್ಚೆ ಮಧ್ಯದಲ್ಲಿ ಬಿಲ್ ಏಕೆ ಬಂತೆಂಬುದು ಗೊತ್ತಾಗುತ್ತಿಲ್ಲ.

ಶ್ರೀ ಜಿ.ವಿ. ಶ್ರೀರಾಮರೆಡ್ಡಿ: ಆಯಿತು, ಸಾರ್ ಬಿಲ್ ಪಾಸ್ ಮಾಡಿಕೊಂಡು ಹೋಗಿ.

ಶ್ರೀ ಬಿ.ಎಸ್. ಯಡಿಯೂರಪ್ಪ: ಮಾನ್ಯ ಉಪಾಧ್ಯಕ್ಷರೆ, ನಾನು ಈಗ ಕಳಸಾಬಂಡೂರಿ ನಾಲ ವಿಷಯಕ್ಕೆ ಸಂಬಂಧಪಟ್ಟಂತೆ ಗೋವಾ ಸರ್ಕಾರ ಸುಪ್ರೀಂಕೋರ್ಟ್‌ಗೆ ಅರ್ಜಿಯನ್ನು ಹಾಕಿದ್ದು, ಅದನ್ನು ಕೋರ್ಟ್‌ನಲ್ಲಿ ವಜಾ ಮಾಡಿರುವ ವಿಚಾರ ಸುದ್ದಿ ಬರುತ್ತಿದೆಯೆಂದು ಹೇಳಿದ್ದೇನೆ. ನಾವು ಇದನ್ನು ಕನ್‌ಫರ್ಮ್ ಮಾಡಿಕೊಳ್ಳೋಣ. ನಾವು ಇದನ್ನು ಕನ್‌ಫರ್ಮ್ ಮಾಡಿಕೊಳ್ಳುವ ಪ್ರಯತ್ನವನ್ನು ಮಾಡುತ್ತಿದ್ದೇವೆ.

(ಅಡಚಣೆ)

ಶ್ರೀ ವೈಜನಾಥ್ ಪಾಟೀಲ್: ಮಾನ್ಯ ಉಪಾಧ್ಯಕ್ಷರೆ, ಇನ್ನು ಡಾ: ನಂಜುಂಡಪ್ಪನವರ ವರದಿಯ ಮೇಲೆ ಇನ್ನೂ ಚರ್ಚೆ ಮುಗಿದಿಲ್ಲ. ಇನ್ನು ಮಾತನಾಡುವವರು ಇದ್ದೇವೆ., ಅದು ಆದಮೇಲೆ ನಂತರ ಇದನ್ನು ತೆಗೆದುಕೊಳ್ಳಿ.

(ಅಡಚಣೆ)

ಉಪಾಧ್ಯಕ್ಷರು: ಪ್ರಸ್ತಾವ ಏನೆಂದರೆ,

"ಉಭಯ ಸದನಗಳಿಂದ ಅಂಗೀಕಾರವಾದಂತೆ ಹಾಗೂ ಭಾರತದ ರಾಷ್ಟ್ರಾಧ್ಯಕ್ಷರಿಂದ ಪುನರ್ ಪರಿಗಣನೆಗೆ ಹಿಂತಿರುಗಿಸಲ್ಪಟ್ಟಂತೆ ಮತ್ತು ವಿಧಾನ ಪರಿಷತ್ತಿನಿಂದ ತಿದ್ದುಪಡಿಯೊಂದಿಗೆ ಎರಡನೇ ಬಾರಿಗೆ ಅಂಗೀಕೃತವಾದ ರೂಪದಲ್ಲಿರುವ 2004ನೇ ಸಾಲಿನ ಕರ್ನಾಟಕ ಕಾಕಂಬಿ ನಿಯಂತ್ರಣ ವಿಧೇಯಕವನ್ನು ಪರ್ಯಾಲೋಚಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ರಿಂದ 41ರವರೆಗೆ, ಎರಡೂ ಸೇರಿದಂತೆ,

ಉಪಾಧ್ಯಕ್ಷರು: ಪ್ರಸ್ತಾವ ಏನೆಂದರೆ:– ಖಂಡ 2 ರಿಂದ 41ರವರೆಗೆ, ಎರಡೂ ಸೇರಿದಂತೆ, ಈ ವಿಧೇಯಕದ ಅಂಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ರಿಂದ 41ರವರೆಗೆ, ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಉಪಾಧ್ಯಕ್ಷರು: ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು): ಮಾನ್ಯ ಉಪಾಧ್ಯಕ್ಷರೆ, "ಉಭಯ ಸದನಗಳಿಂದ ಅಂಗೀಕಾರವಾದಂತೆ ಹಾಗೂ ಭಾರತದ ರಾಷ್ಟ್ರಾಧ್ಯಕ್ಷರಿಂದ ಪುನರ್ ಪರಿಗಣನೆಗೆ ಹಿಂತಿರುಗಿಸಲ್ಪಟ್ಟಂತೆ ಮತ್ತು ವಿಧಾನ ಪರಿಷತ್ತಿನಿಂದ ತಿದ್ದುಪಡಿಯೊಂದಿಗೆ ಎರಡನೇ ಬಾರಿಗೆ ಅಂಗೀಕೃತವಾದ ರೂಪದಲ್ಲಿರುವ 2004ನೇ ಸಾಲಿನ ಕರ್ನಾಟಕ ಕಾಕಂಬಿ ನಿಯಂತ್ರಣ ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ."

ಉಪಾಧ್ಯಕ್ಷರು: ಪ್ರಸ್ತಾವ ಏನೆಂದರೆ,

"ಉಭಯ ಸದನಗಳಿಂದ ಅಂಗೀಕಾರವಾದಂತೆ ಹಾಗೂ ಭಾರತದ ರಾಷ್ಟ್ರಾಧ್ಯಕ್ಷರಿಂದ ಪುನರ್ ಪರಿಗಣನೆಗೆ ಹಿಂತಿರುಗಿಸಲ್ಪಟ್ಟಂತೆ ಮತ್ತು ವಿಧಾನ ಪರಿಷತ್ತಿನಿಂದ ತಿದ್ದುಪಡಿಯೊಂದಿಗೆ ಎರಡನೇ ಬಾರಿಗೆ ಅಂಗೀಕೃತವಾದ ರೂಪದಲ್ಲಿರುವ 2004ನೇ ಸಾಲಿನ ಕರ್ನಾಟಕ ಕಾಕಂಬಿ ನಿಯಂತ್ರಣ ವಿಧೇಯಕವನ್ನು ಅಂಗೀಕರಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

***ಅನುಬಂಧ–1**

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

(ಆ) ಕರ್ನಾಟಕ ವಿಧಾನ ಮಂಡಲ (ಅನರ್ಹತೆಯನ್ನು ತಡೆಗಟ್ಟುವ) (ತಿದ್ದುಪಡಿ) ವಿಧೇಯಕ 2006

ಶ್ರೀ ಜಗದೀಶ್ ಶೆಟ್ಟರ್: ಮಾನ್ಯ ಉಪಾಧ್ಯಕ್ಷರೆ, ಬಗರ್‌ಹುಕುಂ ಅವಧಿಯನ್ನು ವಿಸ್ತರಣೆ ಮಾಡಬೇಕಾಗಿದೆ.

ಶ್ರೀ ಎಂ.ಪಿ. ಪ್ರಕಾಶ್: ಮಾನ್ಯ ಉಪಾಧ್ಯಕ್ಷರೆ, ನಾನು ನಿನ್ನೆ ತಾನೇ ಈ ವಿಚಾರವನ್ನು ಪ್ರಸ್ತಾಪ ಮಾಡುವಾಗ ಲಾಭದಾಯಕ ಹುದ್ದೆಯ ವಿಚಾರದಲ್ಲಿ ರಾಜ್ಯಪಾಲರು ಕಳುಹಿಸಿಕೊಟ್ಟಿರುವಂತಹ ಸಂದೇಶದ ಮಸೂದೆಯನ್ನು ನಾವು ನಾಳೆ ಚರ್ಚೆ ಮಾಡಬೇಕು ಎಂದು ನಾನು ನಿನ್ನೆ ಹೇಳಿದ್ದೇನೆ. ತಮ್ಮ ಒಪ್ಪಿಗೆಯನ್ನು ಪಡೆದುಕೊಂಡಿದ್ದೇನೆ, ಇಡೀ ಸದನವು ಒಪ್ಪಿಗೆಯನ್ನು ಕೊಟ್ಟಿದೆ. ನಾಳೆ ಇದನ್ನು ತೆಗೆದುಕೊಳ್ಳಬೇಕೆಂದು ಒಪ್ಪಿಗೆಯನ್ನು ಕೊಟ್ಟಿದೆ, ಆಗ ತಾವು ಸದನದಲ್ಲಿ ಇದ್ದಿರಲ್ಲಾ,

---

*ಅನುಬಂಧ–1 ಅಂಗೀಕರಿಸಲ್ಪಟ್ಟ ಮಸೂದೆಯನ್ನು ಅನುಬಂಧದಲ್ಲಿ ಲಗತ್ತಿಸಲಾಗಿದೆ.